# ಕರ್ನಾಟಕ ವಿಧಾನಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 1560 |
| ಮಾನ್ಯ ವಿಧಾನ ಪರಿಷತ್ತಿನ ಸದಸ್ಯರ ಹೆಸರು | ಶ್ರೀ ಪ್ರತಾಪ್ ಸಿಂಹ ನಾಯಕ್ ಕೆ (ವಿಧಾನ ಸಭಾ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | 19/12/2025 |
| ಉತ್ತರಿಸುವ ಸಚಿವರು | ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರು |

| ಕ್ರ ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿ ಹಿರಿಯ ನಾಗರೀಕರಿಗೆ ಸರ್ಕಾರದಿಂದ ದೊರೆಯುತ್ತಿರುವ ನೆರವು, ಸಹಾಯ ಮತ್ತು ಸೌಲಭ್ಯಗಳು ಯಾವುವು; | ರಾಜ್ಯದಲ್ಲಿ ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆಯಿಂದ ಹಿರಿಯ ನಾಗರಿಕರಿಗೆ ದೊರೆಯುತ್ತಿರುವ ನೆರವು, ಸಹಾಯ ಮತ್ತು ಸೌಲಭ್ಯಗಳ ವಿವರ ಹಾಗೂ ಹಿರಿಯ ನಾಗರಿಕರ ಸಬಲೀಕರಣಕ್ಕಾಗಿ ಸರ್ಕಾರ ರೂಪಿಸಿರುವ ಕಾರ್ಯಕ್ರಮ ಹಾಗೂ ಯೋಜನೆಗಳ ಮಾಹಿತಿಯನ್ನು **ಅನುಬಂಧ**ದಲ್ಲಿ ಒದಗಿಸಲಾಗಿದೆ. |
| ಆ) | ರಾಜ್ಯದಲ್ಲಿ ಹಿರಿಯ ನಾಗರಿಕರ ಸಬಲೀಕರಣಕ್ಕಾಗಿ ಸರ್ಕಾರ ರೂಪಿಸಿರುವ ಕಾರ್ಯಕ್ರಮ ಹಾಗೂ ಯೋಜನೆಗಳೇನು; ಕಳೆದ ಎರಡು ವರ್ಷಗಳಲ್ಲಿ ಹಿರಿಯ ನಾಗರಿಕರ ಸಬಲೀಕರಣಕ್ಕಾಗಿ ವಿನಿಯೋಗಿಸಿರುವ ಅನುದಾನದ ವಿವರಗಳೇನು; | ಕಳೆದ 2 ವರ್ಷಗಳಲ್ಲಿ ಹಿರಿಯ ನಾಗರಿಕರ ಸಬಲೀಕರಣಕ್ಕಾಗಿ ಇಲಾಖೆಯಿಂದ ವಿನಿಯೋಗಿಸಿರುವ ಅನುದಾನದ ವಿವರವು ಈ ಕೆಳಕಂಡಂತಿರುತ್ತದೆ. (ಕೆಳಗಿನ ಕೋಷ್ಟಕ ನೋಡಿ) |
| ಇ) | ಹಿರಿಯ ನಾಗರಿಕರಿಗೆ ಪ್ರಸ್ತುತ ನೀಡುತ್ತಿರುವ ಮಾಸಾಶನ ಹಣವನ್ನು ಇಂದಿನ ಅವರ ಅವಶ್ಯಕತೆಗಳ ವೆಚ್ಚವನ್ನು ಗಮನದಲ್ಲಿಟ್ಟುಕೊಂಡು ಅದಕ್ಕೆ ಪೂರಕವಾಗಿ ಸಾಕಷ್ಟು ಹೆಚ್ಚು ಮಾಡಲು ಸರ್ಕಾರ ಈ ಕೂಡಲೇ ಕ್ರಮ ವಹಿಸುವುದೇ; | ದಿನಾಂಕ:25.08.2025 ರಂದು ಹಿರಿಯ ನಾಗರಿಕರಿಗೆ ಮಾಸಿಕ ಪಿಂಚಣಿ ಹೆಚ್ಚಿಸುವ ಕುರಿತು ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಕಂದಾಯ ಇಲಾಖೆ ಇವರಿಗೆ ಅ.ಸ.ಪತ್ರ ಬರೆಯಲಾಗಿದ್ದು, ಈ ಕುರಿತು ಕ್ರಮವಹಿಸಲಾಗುತ್ತಿದೆ. |

| ಯೋಜನೆಯ ಹೆಸರು | 2023-24 (ರೂ.ಲಕ್ಷಗಳಲ್ಲಿ) | 2024-25 (ರೂ.ಲಕ್ಷಗಳಲ್ಲಿ) |
|---|---|---|
| ಹಿರಿಯ ನಾಗರಿಕರ ಹಗಲು ಯೋಗಕ್ಷೇಮ ಕೇಂದ್ರ | 227.06 | 315.37 |
| ಹಿರಿಯ ನಾಗರಿಕರ ಸಹಾಯವಾಣಿ ಕೇಂದ್ರ | 151.54 | 215.47 |
| ವೃದ್ಧಾಶ್ರಮಗಳು | 480.00 | 729.20 |

| | | |
|---|---|---|
| ಘ) | ಮಾನಸಿಕ ಆರೋಗ್ಯ ಸಮಸ್ಯೆ, ಮರೆವು, ಖಿನ್ನತೆ, ಹಠಮಾರಿತನ, ಅನಾರೋಗ್ಯ ಸಮಸ್ಯೆ ಎದುರಿಸುತ್ತಿರುವ ಹಿರಿಯ ನಾಗರಿಕರನ್ನು ನೋಡಿಕೊಳ್ಳುವ ಬಗ್ಗೆ ಇರುವ ಹಾಗೂ ಸಾಕಷ್ಟು ಸಹಕಾರಿಯಾಗಿರುವ 'ವಯೋ ಮಾನಸ ಸಂಜೀವಿನಿ' ಆನ್‌ಲೈನ್ ಕಾರ್ಯಕ್ರಮದ ಬಗ್ಗೆ ಹೆಚ್ಚಿನ ಮಾಹಿತಿ ಹಾಗೂ ಅರಿವು ಮೂಡಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು? | ಮಾನಸಿಕ ಆರೋಗ್ಯ ಸಮಸ್ಯೆ, ಮರೆವು, ಖಿನ್ನತೆ, ಹಠಮಾರಿತನ, ಅನಾರೋಗ್ಯ ಸಮಸ್ಯೆ ಎದುರಿಸುತ್ತಿರುವ ಹಿರಿಯ ನಾಗರಿಕರನ್ನು ನೋಡಿಕೊಳ್ಳುವ ಬಗ್ಗೆ ಇರುವ ಹಾಗೂ ಸಾಕಷ್ಟು ಸಹಕಾರಿಯಾಗಿರುವ "ವಯೋ ಮಾನಸ ಸಂಜೀವಿನಿ" ಆನ್‌ಲೈನ್ ಕಾರ್ಯಕ್ರಮವನ್ನು ಈ ಇಲಾಖೆಯಿಂದ ಅನುಷ್ಠಾನ ಮಾಡಲಾಗುತ್ತಿಲ್ಲ. ಸದರಿ ಕಾರ್ಯಕ್ರಮವನ್ನು NIMHANS ಸಂಸ್ಥೆಯು ಅನುಷ್ಠಾನ ಮಾಡುತ್ತಿದೆ |

**ಸಂಖ್ಯೆ**: ಮಮಇ 421 ಪಿಹೆಚ್‌ಪಿ 2025

**(ಲಕ್ಷ್ಮೀ ಆರ್. ಹೆಬ್ಬಾಳಕರ್)**
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ,
ವಿಕಲಚೇತನರ ಹಾಗೂ ಹಿರಿಯ ನಾಗರಿಕರ
ಸಬಲೀಕರಣ ಸಚಿವರು